**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

30.09.2025 : 1310 hrs

*******

ಮುಖ್ಯಾಂಶಗಳು

೧. ವಿಧಾನಸಭಾ ಚುನಾವಣೆಗೆ ಸಜ್ಜಾಗುತ್ತಿರುವ ಬಿಹಾರದ ಅಂತಿಮ ಮತದಾರರ ಪಟ್ಟಿ ಇಂದು ಪ್ರಕಟ

೨. ಸಶಸ್ತ್ರ ಪಡೆಗಳ ಪರಸ್ಪರ ಕಾರ್ಯಸಾಧ್ಯತೆ ಮತ್ತು ಸಮನ್ವಯ ಇಂದಿನ ಅಗತ್ಯ - ರಕ್ಷಣಾ ಸಚಿವ ರಾಜನಾಥ್ ಸಿಂಗ್

೩. ತಮಿಳುನಾಡಿನ ಕರೂರ್ ಕಾಲ್ತುಳಿತ ಪ್ರಕರಣ: ಕೊಯಮತ್ತೂರು ತಲುಪಿದ ಎನ್‌ಡಿಎ ಸತ್ಯಶೋಧನಾ ನಿಯೋಗ

೪. ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಟೂರ್ನಿ ಇಂದಿನಿಂದ ಆರಂಭ: ಉದ್ಘಾಟನಾ ಪಂದ್ಯದಲ್ಲಿ ಭಾರತ-ಶ್ರೀಲಂಕಾ ಮುಖಾಮುಖಿ

**************

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಎಸ್‌ಐಆರ್ ಭಾಗವಾಗಿ ವಿಧಾನಸಭಾ ಚುನಾವಣೆಗೆ ಸಜ್ಜಾಗುತ್ತಿರುವ ಬಿಹಾರದ ಅಂತಿಮ ಮತದಾರರ ಪಟ್ಟಿಯನ್ನು ಇಂದು ಭಾರತೀಯ ಚುನಾವಣಾ ಆಯೋಗ ಪ್ರಕಟಿಸಲಿದೆ. ರಾಜ್ಯದಲ್ಲಿ ವಿಧಾನಸಭಾ ಚುನಾವಣೆಗಳನ್ನು ಈ ಪಟ್ಟಿಯ ಆಧಾರದ ಮೇಲೆ ನಡೆಸಲಾಗುವುದು. ಚುನಾವಣಾ ಆಯೋಗ ಅಂತಿಮ ಮತದಾರರ ಪಟ್ಟಿಯನ್ನು ಆನ್‌ಲೈನ್ ಮೂಲಕ ಬಿಡುಗಡೆ ಮಾಡಲಿದ್ದು, ಇಂದು ಮಧ್ಯಾಹ್ನ ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ಈ ಪಟ್ಟಿ ಲಭ್ಯವಿರಲಿದೆ. ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ ಕಚೇರಿಯ ಪ್ರಕಾರ, ಮತದಾರರ ಪಟ್ಟಿಯ ಭೌತಿಕ ಪ್ರತಿಗಳನ್ನು ಎಲ್ಲಾ ಜಿಲ್ಲಾ ಚುನಾವಣಾ ಅಧಿಕಾರಿಗಳು, ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳಿಗೆ ಲಭ್ಯವಾಗುವಂತೆ ಮಾಡಲಾಗುತ್ತದೆ. ಅಂತಿಮ ಪಟ್ಟಿಯನ್ನು ಎಲ್ಲಾ ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ರಾಜಕೀಯ ಪಕ್ಷಗಳಿಗೂ ಒದಗಿಸಲಾಗುವುದು.

ಎಸ್‌ಐಆರ್ ಅಭಿಯಾನದ ನಂತರ, ಈ ವರ್ಷ ಆಗಸ್ಟ್ ೧ ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಯಿತು. ಇದು ಗಣತಿ ಅರ್ಜಿಗಳನ್ನು ಸಲ್ಲಿಸಿದ ೭.೨೪ ಕೋಟಿಗೂ ಹೆಚ್ಚು ಮತದಾರರ ಹೆಸರುಗಳನ್ನು ಒಳಗೊಂಡಿತ್ತು.

**************

೨೧ ನೇ ಶತಮಾನದಲ್ಲಿ ಸಶಸ್ತ್ರ ಪಡೆಗಳ ನಡುವಿನ ಪರಸ್ಪರ ಕಾರ್ಯಸಾಧ್ಯತೆ ಮತ್ತು ಸಮನ್ವಯ, ಕಾರ್ಯಾಚರಣೆಯ ಅವಶ್ಯಕತೆಗಳಾಗಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಇಂದು ನವದೆಹಲಿಯಲ್ಲಿ ನಡೆದ ಮೂರು ಸೇನಾಪಡೆಗಳ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಬೆದರಿಕೆಗಳು ಹೆಚ್ಚು ಸಂಕೀರ್ಣವಾಗಿವೆ. ಆಪರೇಷನ್ ಸಿಂಧೂರ್ ಸಮಯದಲ್ಲಿ, ಭಾರತವು ತನ್ನ ವಾಯು ರಕ್ಷಣೆಯಲ್ಲಿ ಗಮನಾರ್ಹ ಸಮನ್ವಯತೆ ಪ್ರದರ್ಶಿಸಿತು. ಇದು ನಿರ್ಣಾಯಕವೆಂದು ಸಾಬೀತಾಯಿತು ಎಂದು ಅವರು ಹೇಳಿದರು.

**ಧ್ವನಿ : ರಕ್ಷಣಾ ಸಚಿವ ರಾಜನಾಥ್ ಸಿಂಗ್,**

**************

ನವರಾತ್ರಿಯ ಎಂಟನೇ ದಿನವಾದ ಇಂದು, ದುರ್ಗಾ ದೇವಿಯ ಮಹಾಗೌರಿ ರೂಪವನ್ನು ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಭಾರತ ಮತ್ತು ವಿದೇಶಗಳಲ್ಲಿ ನೆಲೆಸಿರುವ ನಾಗರಿಕರಿಗೆ ಶುಭಾಶಯಗಳನ್ನು ಕೋರಿದ್ದಾರೆ. ತಮ್ಮ ಸಂದೇಶದಲ್ಲಿ ರಾಷ್ಟ್ರಪತಿಗಳು, ಈ ಹಬ್ಬ ದೇಶದ ಸಂಸ್ಕೃತಿ, ನಂಬಿಕೆ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಸಂಕೇತಿಸುತ್ತದೆ. ದುರ್ಗಾ ಮಾತೆಯನ್ನು ಒಂಬತ್ತು ರೂಪಗಳಲ್ಲಿ ಪೂಜಿಸುವುದು ಆಧ್ಯಾತ್ಮಿಕ ಮಾರ್ಗ ಮಾತ್ರವಲ್ಲದೆ, ಸತ್ಯ, ನ್ಯಾಯ ಮತ್ತು ಕರುಣೆಯೊಂದಿಗೆ ಮುಂದುವರಿಯಲು ಎಲ್ಲರಿಗೂ ಸ್ಫೂರ್ತಿ ನೀಡುತ್ತದೆ ಎಂದು ತಿಳಿಸಿದ್ದಾರೆ.

**************

ತಮಿಳುನಾಡಿನ ಕರೂರ್ ಕಾಲ್ತುಳಿತ ಪ್ರಕರಣದ ಬಗ್ಗೆ ಪರಿಶೀಲಿಸಲು ರಚಿಸಲಾದ ಎನ್‌ಡಿಎ ಸತ್ಯಶೋಧನಾ ನಿಯೋಗ ಇಂದು ಕೊಯಮತ್ತೂರಿಗೆ ಆಗಮಿಸಿತು. ವಿಮಾನ ನಿಲ್ದಾಣದಲ್ಲಿ

ಸುದ್ದಿಗಾರರೊಂದಿಗೆ ಮಾತನಾಡಿದ ನಿಯೋಗದ ನೇತೃತ್ವ ವಹಿಸಿರುವ ಸಂಸದೆ ಹೇಮಮಾಲಿನಿ, ಕರೂರಿನಲ್ಲಿ ಕಾಲ್ತುಳಿತಕ್ಕೆ ಕಾರಣವಾದ ಅಂಶಗಳನ್ನು ಪರಿಶೀಲಿಸಲು ತಂಡವನ್ನು ರಚಿಸಲಾಗಿದೆ ಎಂದರು. ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ಸಂತಾಪ ಸೂಚಿಸಿದ ಅವರು, ನಿಯೋಗ ಸಂತ್ರಸ್ತ ಕುಟುಂಬಗಳನ್ನು ಭೇಟಿ ಮಾಡಲಿದ್ದು ಆಸ್ಪತ್ರೆಗೆ ದಾಖಲಾದವರನ್ನು ವಿಚಾರಿಸಿ ಸಾಂತ್ವನ ತಿಳಿಸಲು ಆಸ್ಪತ್ರೆಗಳಿಗೆ ಭೇಟಿ ನೀಡಲಿದೆ ಎಂದು ಹೇಳಿದರು. ನಿಯೋಗದ ಸದಸ್ಯರಾದ ಮಾಜಿ ಕೇಂದ್ರ ಸಚಿವ ಅನುರಾಗ್ ಠಾಕೂರ್, ಎಂಟು ಸದಸ್ಯರ ನಿಯೋಗದಲ್ಲಿ ವಿವಿಧ ಪಕ್ಷಗಳು ಮತ್ತು ರಾಜ್ಯಗಳ ಸದಸ್ಯರು ಸೇರಿದ್ದಾರೆ. ನಿಯೋಗವು ಸ್ಥಳೀಯ ಪ್ರದೇಶಗಳಿಗೆ ಭೇಟಿ ನೀಡಿ, ಸ್ಥಳೀಯ ಜನರು, ಅಧಿಕಾರಿಗಳು ಮತ್ತಿತರರನ್ನು ಭೇಟಿ ಮಾಡಿ ಕಾಲ್ತುಳಿತ ಘಟನೆಗೆ ಸಂಬಂಧಿಸಿದ ಸಂಗತಿಗಳನ್ನು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರಿಗೆ ವರದಿ ಮಾಡಲಿದೆ ಎಂದು ಮಾಹಿತಿ ನೀಡಿದರು. ನಿಯೋಗ ಸಂತ್ರಸ್ತ ಜನರೊಂದಿಗೆ ನಿಂತಿದೆ ಎಂದು ಅವರು ಹೇಳಿದರು.

**************

ತಮಿಳುನಾಡಿನಲ್ಲಿ ಟಿವಿಕೆ ಪಕ್ಷದ ಮುಖಂಡ ನಟ ವಿಜಯ್ ರ‍್ಯಾಲಿ ಸಂದರ್ಭದಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಟಿವಿಕೆ ಕರೂರ್ ನಗರ ಕಾರ್ಯದರ್ಶಿ ಪೊನ್ರಾಜ್ ಅವರನ್ನು ಇಂದು ಪೊಲೀಸರು ಬಂಧಿಸಿದ್ದಾರೆ. ವಿಚಾರಣೆಯ ಬಳಿಕ ಪೊಲೀಸರು ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿದರು. ಕರೂರ್ ಕಾಲ್ತುಳಿತದ ಬಗ್ಗೆ ಸುಳ್ಳು ಸುದ್ದಿ ಹರಡಿದ್ದಕ್ಕಾಗಿ ಯೂಟ್ಯೂಬರ್ ಫೆಲಿಕ್ಸ್ ಜೆರಾಲ್ಡ್ ಅವರನ್ನು ಸಹ ಬಂಧಿಸಲಾಗಿದೆ. ಈವರೆಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಬಂಧಿಸಲಾಗಿದೆ.

**************

ಗಾಂಧಿ ಜಯಂತಿ ಆಚರಣೆಗೆ ಕೇವಲ ಎರಡು ದಿನಗಳ ಮೊದಲು, ಲಂಡನ್‌ನ ಟ್ಯಾವಿಸ್ಟಾಕ್ ಸ್ಕ್ವೇರ್‌ನಲ್ಲಿರುವ ಮಹಾತ್ಮ ಗಾಂಧಿಯವರ ಪ್ರತಿಮೆಯನ್ನು ವಿರೂಪಗೊಳಿಸಲಾಗಿದೆ. ಕಂಚಿನ ಪ್ರತಿಮೆಯ ಸ್ತಂಭದಲ್ಲಿ ಭಾರತ ವಿರೋಧಿ ಬರಹಗಳು ಕಂಡುಬಂದಿವೆ. ಈ ಘಟನೆಯನ್ನು ಭಾರತದ ಹೈಕಮಿಷನ್ ತೀವ್ರವಾಗಿ ಖಂಡಿಸಿದ್ದು, ಇದನ್ನು ನಾಚಿಕೆಗೇಡಿನ ಕೃತ್ಯ ಹಾಗೂ ಶಾಂತಿ

ಮತ್ತು ಅಹಿಂಸೆಯ ಆದರ್ಶಗಳ ಮೇಲಿನ ದಾಳಿ ಎಂದು ಬಣ್ಣಿಸಿದೆ. ಲಂಡನ್ ಪೊಲೀಸರು ಈ ವಿಷಯದ ಬಗ್ಗೆ ತನಿಖೆ ಆರಂಭಿಸಿದ್ದಾರೆ.

**************

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಧ್ಯೇಯದೊಂದಿಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದಲ್ಲಿ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿರತವಾಗಿ ಶ್ರಮಿಸುತ್ತಿದೆ. ಈ ಹಿನ್ನೆಲೆಯಲ್ಲಿ ಆಕಾಶವಾಣಿ ಪ್ರಸ್ತುತಪಡಿಸುತ್ತಿರುವ ವಿಶೇಷ ಸರಣಿ - "ಸೇವಾ ಪರ್ವ" ದಲ್ಲಿಂದು, ಕೇಂದ್ರ ಸರ್ಕಾರ ರಾಷ್ಟ್ರೀಯ ಶಿಕ್ಷಣ ನೀತಿ - ೨೦೨೦ರ ಮೂಲಕ ದೇಶಕ್ಕಾಗಿ ಯಾವರೀತಿ ಆಧುನಿಕ, ಒಳಗೊಳ್ಳುವ ಮತ್ತು ಭವಿಷ್ಯ-ಸಿದ್ಧ ಶಿಕ್ಷಣ ವ್ಯವಸ್ಥೆಯನ್ನು ನಿರ್ಮಿಸುತ್ತಿದೆ ಎಂಬುದರ ಕುರಿತ ಒಂದು ವಿಶೇಷ ವರದಿ ಇದೀಗ ಮೂಡಿಬರಲಿದೆ.

**ವರದಿ: ವಿ.ಶೋಭಾ (೪೫ ಸೆಕೆಂಡ್‌ಗಳು)**

ಶಿಕ್ಷಣವು ಒಂದು ರಾಷ್ಟ್ರದ ಭವ್ಯಭವಿಷ್ಯವನ್ನು ರೂಪಿಸುವ ಅಡಿಪಾಯವಾಗಿದೆ. ಅದು ದೇಶದ ಮುಂದಿನ ಪೀಳಿಗೆಯ ಮನಸ್ಸುಗಳನ್ನು ಪ್ರೇರೇಪಿಸುತ್ತದೆ. ಜೂನ್ ೨೦೨೦ರಲ್ಲಿ ಪ್ರಧಾನಿ ನರೇಂದ್ರ ಮೋದಿ ಸರ್ಕಾರವು ರಾಷ್ಟ್ರೀಯ ಶಿಕ್ಷಣ  ನೀತಿಯನ್ನು ಹೊರತಂದಿತು. ಈ ಮೂಲಕ ೩೪ ವರ್ಷಗಳಲ್ಲಿ ಮೊದಲ ಬಾರಿಗೆ ಭಾರತದ ಶಿಕ್ಷಣ ವ್ಯವಸ್ಥೆಯನ್ನು ಕೂಲಂಕುಷವಾಗಿ ಪರಿಶೀಲಿಸಲು ಮತ್ತು ೨೧ ನೇ ಶತಮಾನದ ಅಗತ್ಯಗಳಿಗೆ ಅನುಗುಣವಾಗಿ ಅದನ್ನು ಹೊಂದಿಸಲು ಶಿಕ್ಷಣಕ್ಕೆ ಸಮಾನ ಅವಕಾಶಗಳನ್ನು ಒದಗಿಸುವುದು ತನ್ನ ಉದ್ದೇಶ ಎಂದು ಪ್ರಧಾನಿ ಮೋದಿ ಹೇಳಿದ್ದರು. ರಾಷ್ಟ್ರೀಯ ಶಿಕ್ಷಣ ನೀತಿ -೨೦೨೦ ಮಾಧ್ಯಮಿಕ ಶಿಕ್ಷಣ ಮತ್ತು ಉನ್ನತ ಶಿಕ್ಷಣದಾದ್ಯಂತ ವೃತ್ತಿಪರ ಮತ್ತು ಪ್ರಾಯೋಗಿಕ ಕೌಶಲ್ಯ ಅಭಿವೃದ್ಧಿಯನ್ನು  ಸಂಯೋಜಿಸುವತ್ತ ಒತ್ತು ನೀಡುತ್ತದೆ. ಇದು ಆರಂಭಿಕ ಮತ್ತು ಮಾಧ್ಯಮಿಕ ಹಂತಗಳಲ್ಲಿ ವೃತ್ತಿಪರ ಶಿಕ್ಷಣವನ್ನು ಪಡೆಯಲು ಅವಕಾಶ ನೀಡುತ್ತದೆ ಮತ್ತು ಬಹು ಭಾಷೆಗಳನ್ನು ಚೈತನ್ಯಶೀಲವಾಗಿಡಲು ಸಹಕರಿಸುತ್ತ ದೆ. ಈ ನೀತಿಯು ಮೂಲಭೂತ ಸಾಕ್ಷರತೆ ಮತ್ತು ಮೂಲಭೂತ ಸಂಖ್ಯಾ ಜ್ಞಾನದ  ಕಲಿಕೆಗೆ  ಒತ್ತು ನೀಡುತ್ತದೆ. ವಿಶೇಷವೆಂದರೆ  ಈ ನೀತಿಯಲ್ಲಿ ಶೈಕ್ಷಣಿಕ ವಿಷಯಗಳು, ಪಠ್ಯೇತರ ವಿಷಯಗಳು ಮತ್ತು ವೃತ್ತಿಪರ ವಿಷಯಗಳ ನಡುವೆ ಕಟ್ಟುನಿಟ್ಟಿನ  ಪ್ರತ್ಯೇಕತೆಯನ್ನು ಹೊಂದಿರುವದಿಲ್ಲ. ಕಳೆದ ಐದು ವರ್ಷಗಳಲ್ಲಿ

ಈ ರಾಷ್ಟ್ರೀಯ ಶಿಕ್ಷಣ ನೀತಿಯು ಭಾರತೀಯ ಶಕ್ಷಣ ವ್ಯವಸ್ಥೆಗೆ ಮತ್ತು ಭಾರತದ ಭವಿಷ್ಯಕ್ಕೆ ಭದ್ರ ಅಡಿಪಾಯವನ್ನು ಹಾಕಿದೆ ನಿರಂತರ ಬದ್ಧತೆ ಮತ್ತು ಸಹಯೋಗದೊಂದಗೆ ಶಿಕ್ಷಣ ನೀತಿಯು ಜ್ಞಾನವನ್ನು ನೀಡುವ ಜೊತೆಗೆ ಪ್ರತಿ ಮಗುವಿನಲ್ಲಿಯೂ ಆತ್ಮವಿಶ್ವಾಸ, ಕುತೂಹಲ ಮತ್ತು ಸಾಮರ್ಥ್ಯಗಳನ್ನು ಪೋಷಿಸುವ ಮೂಲಕ ಶಿಕ್ಷಣ ವ್ಯವಸ್ಥೆಯಲ್ಲಿ ಭರವಸೆಯನ್ನು ಮೂಡಿಸಿದೆ.

**************

ಆಹಾರ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು, ಪೌಷ್ಠಿಕಾಂಶದ ಫಲಿತಾಂಶಗಳನ್ನು ಸುಧಾರಿಸಲು, ಜೀವನೋಪಾಯವನ್ನು ಬಲಪಡಿಸಲು ಮತ್ತು ಬಡತನವನ್ನು ನಿರ್ಮೂಲನೆ ಮಾಡಲು ಭಾರತವು ಹಲವಾರು ಪರಿವರ್ತನಾತ್ಮಕ ಮತ್ತು ಸಮಗ್ರ ಉಪಕ್ರಮಗಳನ್ನು ಕೈಗೊಂಡಿದೆ ಎಂದು ಕೇಂದ್ರ ಸಚಿವ ರಾಜೀವ್ ರಂಜನ್ ಸಿಂಗ್ ಹೇಳಿದ್ದಾರೆ. ರೋಮ್‌ನಲ್ಲಿ ನಡೆದ ಆಹಾರ ಮತ್ತು ಕೃಷಿ ಸಂಸ್ಥೆ ಎಫ್‌ಎಒ ದಲ್ಲಿ ಸುಸ್ಥಿರ ಜಾನುವಾರು ಪರಿವರ್ತನೆಯ ಕುರಿತಾದ ೨ನೇ ಜಾಗತಿಕ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದಲ್ಲಿ ಜಾನುವಾರು ಮತ್ತು ಡೈರಿ ಕ್ಷೇತ್ರದ ಸಮಗ್ರ ಬೆಳವಣಿಗೆಯಲ್ಲಿ ಭಾರತದ ರೈತ ಕೇಂದ್ರಿತ ಉಪಕ್ರಮಗಳು ಮತ್ತು ನಾವೀನ್ಯತೆಗಳು ಪ್ರಮುಖ ಪಾತ್ರ ವಹಿಸಿವೆ ಎಂದರು. ಕೋವಿಡ್-೧೯ ಸಮಯದಿಂದ, ಭಾರತದ ಕಲ್ಯಾಣ ಉಪಕ್ರಮಗಳು ೨೬೯ ದಶಲಕ್ಷ ಜನರನ್ನು ತೀವ್ರ ಬಡತನದಿಂದ ಹೊರತಂದಿವೆ. ೨೦೨೫ ರ ವಿಶ್ವಬ್ಯಾಂಕ್ ವರದಿಯ ಪ್ರಕಾರ ತೀವ್ರ ಬಡತನ ಶೇಕಡ ೨೭.೧ ರಿಂದ ಶೇಕಡ ೫.೩ ಕ್ಕೆ ಇಳಿದಿದೆ ಎಂದು ಅವರು ಹೇಳಿದರು.

**************

ಭವಿಷ್ಯದಲ್ಲಿ ಜೈವಿಕ ಬೆದರಿಕೆಗಳು ಮತ್ತು ಪರಮಾಣು ಶಸ್ತ್ರಾಸ್ತ್ರಗಳಿಂದ ಮಾಲಿನ್ಯದ ವಿರುದ್ಧ ಸನ್ನದ್ಧತೆಗಾಗಿ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ಇಂದು ಮಿಲಿಟರಿ ನರ್ಸಿಂಗ್ ಸೇವೆಯ ೧೦೦ ನೇ ಸಂಸ್ಥಾಪನಾ ದಿನದಂದು ವೈಜ್ಞಾನಿಕ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಅವರು, ಕೋವಿಡ್ ಸಾಂಕ್ರಾಮಿಕದ ನಂತರದ ಯುಗದಲ್ಲಿ ಜೈವಿಕ ಬೆದರಿಕೆಗಳು ಹೆಚ್ಚಾಗುವ ಸಾಧ್ಯತೆಯಿದೆ ಮತ್ತು ಅವುಗಳ ವಿರುದ್ಧ

ರಕ್ಷಣಾ ಸನ್ನದ್ಧತೆ ಅಗತ್ಯ ಎಂದರು. ಪರಮಾಣು ಬೆದರಿಕೆಗಳ ವಿರುದ್ಧ ಧೈರ್ಯಶಾಲಿ ಭಾರತಕ್ಕಾಗಿ ಪ್ರಧಾನಿ ನರೇಂದ್ರ ಮೋದಿಯವರ ಕರೆಯನ್ನು ಜನರಲ್ ಚೌಹಾಣ್ ಪುನರುಚ್ಚರಿಸಿದರು.

**************

೨೦೨೫ ರ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಟೂರ್ನಿಗೆ ಗುವಾಹಟಿಯ ಬರ್ಸಪಾರ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ಚಾಲನೆ ದೊರೆಯಲಿದೆ. ಉದ್ಘಾಟನಾ ಪಂದ್ಯದಲ್ಲಿ ಆತಿಥೇಯ ಭಾರತ ಮತ್ತು ಶ್ರೀಲಂಕಾ ತಂಡಗಳು ಮುಖಾಮುಖಿಯಾಗಲಿದ್ದು, ಈ ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಭಾರತೀಯ ಮಹಿಳಾ ಕ್ರಿಕೆಟ್ ತಂಡವು ತಮ್ಮ ಚೊಚ್ಚಲ ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ ಐಸಿಸಿ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದೆ.

**************

ಈ ಬಾರಿಯ ಮಹಿಳಾ ವಿಶ್ವಕಪ್‌ನಲ್ಲಿ ಆಸ್ಟ್ರೇಲಿಯಾ, ಇಂಗ್ಲೆಂಡ್, ಭಾರತ, ನ್ಯೂಜಿಲೆಂಡ್, ದಕ್ಷಿಣ ಆಫ್ರಿಕಾ, ಶ್ರೀಲಂಕಾ, ಬಾಂಗ್ಲಾದೇಶ ಮತ್ತು ಪಾಕಿಸ್ತಾನ ಸೇರಿದಂತೆ ೮ ತಂಡಗಳು. ಭಾರತದ ನಾಲ್ಕು ಸ್ಥಳಗಳಲ್ಲಿ ಮತ್ತು ಶ್ರೀಲಂಕಾದ ಕೊಲಂಬೊದ ಒಂದು ಸ್ಥಳದಲ್ಲಿ ರೌಂಡ್-ರಾಬಿನ್ ಸ್ವರೂಪದಲ್ಲಿ ೨೮ ಲೀಗ್ ಪಂದ್ಯಗಳಲ್ಲಿ ಸ್ಪರ್ಧಿಸಲಿವೆ. ಸಾಂಪ್ರದಾಯಿಕ ಎದುರಾಳಿಗಳಾದ ಭಾರತ ಮತ್ತು ಪಾಕಿಸ್ತಾನ ನಡುವಿನ ಪಂದ್ಯ, ಅಕ್ಟೋಬರ್ ೫ ರಂದು ಕೊಲಂಬೊದಲ್ಲಿ ನಡೆಯಲಿದೆ. ಗುಂಪು ಹಂತದ ಅಂತ್ಯದಲ್ಲಿ ಅಗ್ರ ನಾಲ್ಕು ತಂಡಗಳು ಸೆಮಿಫೈನಲ್‌ಗೆ ಮುನ್ನಡೆಯಲಿವೆ. ಹಾಲಿ ಚಾಂಪಿಯನ್ ಆಸ್ಟ್ರೇಲಿಯಾ, ಮಹಿಳಾ ವಿಶ್ವಕಪ್ ಇತಿಹಾಸದಲ್ಲಿ ಏಳು ಪ್ರಶಸ್ತಿಗಳೊಂದಿಗೆ ಅತ್ಯಂತ ಯಶಸ್ವಿ ತಂಡವಾಗಿದೆ. ಇಂಗ್ಲೆಂಡ್ ನಾಲ್ಕು ಬಾರಿ ಮತ್ತು ನ್ಯೂಜಿಲೆಂಡ್ ಒಮ್ಮೆ ಈ ಪ್ರಶಸ್ತಿಯನ್ನು ಗೆದ್ದಿದೆ.

**************